ಬೆಂಗಳೂರು
ನಗರ ವಿಶ್ವವಿದ್ಯಾನಿಲಯ

ಆಗು ನೀ ಅನಿಕೇತನ
BE BOUNDLESS

BENGALURU
CITY UNIVERSITY

Office of the Registrar(Evaluation), Central College Campus, Dr. B.R AmbedkarVeedhi,
Bengaluru – 560 001. E-mail: registrarevlubcu@gmail.com, Ph.No.080-22295559

**ಸಂಖ್ಯೆ: ಬಿಸಿಯು/01/ಪರೀಕ್ಷಾ/2020** **ದಿನಾಂಕ: 08.10.2020**

**ವಿಷಯ:** ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಅಂತಿಮ ವರ್ಷದ ಪರೀಕ್ಷೆಗಳನ್ನು (ಬ್ಯಾಕ್ ಲಾಗ್ ಸೇರಿದಂತೆ) ಹೊರತುಪಡಿಸಿ Intermediate Semester/Year ಪರೀಕ್ಷಾ ಶುಲ್ಕದಲ್ಲಿ ಶೇ.50 ರಷ್ಟನ್ನು ರಿಯಾಯಿತಿ ನೀಡುವ ಬಗ್ಗೆ.

**ಉಲ್ಲೇಖ:** 1. ಸರ್ಕಾರದ ಆದೇಶ ಸಂಖ್ಯೆ: ಇಡಿ/197ಯುಎನ್ಇ/2020, ಬೆಂಗಳೂರು. ದಿನಾಂಕ 14.08.2020.

2. ಸಿಂಡಿಕೇಟ್ ಸಭೆಯ ನಿರ್ಣಯ ದಿನಾಂಕ 11.09.2020

*****

**ಪ್ರಸ್ತಾವನೆ:**

ರಾಜ್ಯದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ, ಯುಜಿಸಿ ಮಾರ್ಗಸೂಚಿಗಳನ್ವಯ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಪದವಿ, ಸ್ನಾತಕೋತ್ತರ ಪದವಿ, ಡಿಪ್ಲೋಮಾ ಕೋರ್ಸುಗಳ ಮಧ್ಯಂತರ ಸೆಮಿಸ್ಟರ್ ಪರೀಕ್ಷೆಗಳನ್ನು ರದ್ದುಪಡಿಸಲಾಗಿರುತ್ತದೆ. ವಿಶ್ವವಿದ್ಯಾಲಯಗಳು ವಿದ್ಯಾರ್ಥಿಗಳಿಂದ ಈಗಾಗಲೇ ಪರೀಕ್ಷಾ ಶುಲ್ಕವನ್ನು ಸಂಗ್ರಹಿಸಿದ್ದು, ಈ ಶುಲ್ಕದ ಮೊತ್ತವನ್ನು ಹಿಂದಿರುಗಿಸುವಂತೆ ಅಥವಾ ಮುಂದಿನ ಸೆಮಿಸ್ಟರ್‌ಗಳ ಪರೀಕ್ಷಾ ಶುಲ್ಕದಲ್ಲಿ ಶೇಕಡಾ 50ರಷ್ಟು ರಿಯಾಯಿತಿ ನೀಡುವಂತೆ ವಿದ್ಯಾರ್ಥಿಗಳು/ಪೋಷಕರು ಮನವಿಗಳನ್ನು ಸರ್ಕಾರಕ್ಕೆ ಸಲ್ಲಿಸಿರುವ ಹಿನ್ನೆಲೆಯಲ್ಲಿ ಸರ್ಕಾರ ತನ್ನ ಆದೇಶ ಸಂಖ್ಯೆ ಇಡಿ/197/ಯುಎನ್ಇ/2020, ಬೆಂಗಳೂರು. ದಿನಾಂಕ 14.08.2020 ರ ಆದೇಶದಲ್ಲಿ ಮುಂದಿನ ಸೆಮಿಸ್ಟರ್ ಪರೀಕ್ಷಾ ಶುಲ್ಕದಲ್ಲಿ ಶೇ. 50 ರಷ್ಟು ರಿಯಾಯಿತಿ ನೀಡಲು ಆದೇಶಿಸಿದೆ.

ಸರ್ಕಾರಿ ಆದೇಶವನ್ನು ಬೆಂಗಳೂರು ನಗರ ವಿಶ್ವವಿದ್ಯಾಲಯದಲ್ಲಿ ಅಳವಡಿಸಿಕೊಳ್ಳುವ ಸಂಬಂಧ ದಿನಾಂಕ 11.09.2020 ರಂದು ನಡೆದ ಸಿಂಡಿಕೇಟ್ ಸಭೆಯ ಮುಂದೆ ಅನುಮೋದನೆಗಾಗಿ ಮಂಡಿಸಲಾಗಿತ್ತು. ಸಿಂಡಿಕೇಟ್ ಸಭೆಯು ಸರ್ಕಾರದ ಆದೇಶ ಸಂ ಇಡಿ 197 ಯುಎಎನ್ 2020 ದಿನಾಂಕ 14.08.2020 ಪ್ರಕಾರ ಇಂಟರ್ ಮಿಡಿಯೇಟ್ ಸೆಮಿಸ್ಟರ್/ವಾರ್ಷಿಕ ಸ್ನಾತಕ ಮತ್ತು ಸ್ನಾತಕೋತ್ತರ ಪರೀಕ್ಷೆಗಳಿಗಾಗಿ ವಿದ್ಯಾರ್ಥಿಗಳು ಈಗಾಗಲೇ ಪಾವತಿಸಿರುವ ಪರೀಕ್ಷಾ ಶುಲ್ಕದ ಮೊತ್ತದಲ್ಲಿ ಶೇಕಡ 50 ವಿನಾಯಿತಿ ನೀಡಲು ಹಾಗೂ ಈ ರೀತಿ ವಿನಾಯಿತಿ ನೀಡಲಾದ ಮೊತ್ತವನ್ನು ಮುಂದಿನ ಶೈಕ್ಷಣಿಕ ವರ್ಷದಲ್ಲಿ ನಡೆಸುವ ಪರೀಕ್ಷಾ ಶುಲ್ಕಕ್ಕೆ ಹೊಂದಾಣಿಕೆ ಮಾಡಿಕೊಳ್ಳಲು ಸಿಂಡಿಕೇಟ್ ಸಭೆ ಅನುಮೋದನೆ ನೀಡಲು ಸರ್ವಾನುಮತದಿಂದ ಅನುಮೋದಿಸಿದೆ. ಸಿಂಡಿಕೇಟ್ ಸಭೆಯ ನಿರ್ಣಯದಂತೆ ಈ ಆದೇಶ.

**ಆದೇಶ ಸಂಖ್ಯೆ, ಬೆಂ.ನ.ವಿ/ಪ.ವಿ/ಪ.ಶು.ರಿ/2020-21 ದಿನಾಂಕ 08.10.2020**

ಸಿಂಡಿಕೇಟ್ ಸಭೆಯ ದಿನಾಂಕ 11.09.2020ರ ನಿರ್ಣಯದಂತೆ ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಉಲ್ಲೇಖ 1ರ ಸರ್ಕಾರದ ಆದೇಶದನ್ವಯ ಬೆಂಗಳೂರು ನಗರ ವಿಶ್ವವಿದ್ಯಾಲಯದ ವ್ಯಾಪ್ತಿಯ ಸ್ನಾತಕ ಮತ್ತು ಸ್ನಾತಕೋತ್ತರ ವಿಭಾಗಗಳು ಮತ್ತು ಸಂಯೋಜಿತ ಕಾಲೇಜುಗಳ 2019-20ನೇ ಸಾಲಿನ ಸ್ನಾತಕ 2ನೇ ಮತ್ತು 4ನೇ ಸೆಮಿಸ್ಟರ್ ಮತ್ತು ಸ್ನಾತಕೋತ್ತರ 2ನೇ ಸೆಮಿಸ್ಟರ್‌ನಲ್ಲಿ ಪೂರ್ಣ ಪರೀಕ್ಷಾ ಶುಲ್ಕ ಪಾವತಿಸಿರುವ ವಿದ್ಯಾರ್ಥಿಗಳಿಗೆ ಮುಂದಿನ ಸೆಮಿಸ್ಟರ್‌ನಲ್ಲಿ ಪಾವತಿಸುವ ಪರೀಕ್ಷಾ ಶುಲ್ಕದಲ್ಲಿ ಶೇ. 50 ರಷ್ಟು ವಿನಾಯಿತಿ ನೀಡಲು ಆದೇಶಿಸಿದೆ.

ಆದೇಶದ ಮೇರೆಗೆ,

8/10

ಕುಲಸಚಿವರು (ಮೌಲ್ಯಮಾಪನ)

**Registrar (Evaluation)**
**Bengaluru City University**
**Central College Campus**
**Bengaluru - 560 001**

ಗೆ,

ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಿಭಾಗಗಳ ಅಧ್ಯಕ್ಷರು/ ಮುಖ್ಯಸ್ಥರು / ಕೋ–ಆರ್ಡಿನೇಟರ್, ಹಾಗೂ ಎಲ್ಲಾ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳು, ಬೆಂಗಳೂರು ನಗರ ವಿಶ್ವವಿದ್ಯಾನಿಲಯ, ಬೆಂಗಳೂರು – ಇವರ ಮಾಹಿತಿಗಾಗಿ

**ಪ್ರತಿಗಳು:**

1. ವಿತ್ತಧಿಕಾರಿ, ಬೆಂಗಳೂರು ನಗರ ವಿಶ್ವವಿದ್ಯಾನಿಲಯ, ಸೆಂಟ್ರಲ್ ಕಾಲೇಜು, ಬೆಂಗಳೂರು.
2. ಕುಲಪತಿಗಳು/ಕುಲಸಚಿವರು, ಆಪ್ತ ಕಾರ್ಯದರ್ಶಿಗಳು, ಬೆಂಗಳೂರು ನಗರ ವಿಶ್ವವಿದ್ಯಾನಿಲಯ, ಬೆಂಗಳೂರು.
3. ಮೆ. ಲಾಜಿಸಿಸ್, #2549, ಅನುಗ್ರಹ, 7ನೇ ಮುಖ್ಯರಸ್ತೆ, 28 ನೇ ಅಡ್ಡ ರಸ್ತೆ, ಬನಶಂಕರಿ 2ನೇ ಹಂತ, ಬೆಂಗಳೂರು–560070.
4. ವಿಶ್ವವಿದ್ಯಾಲಯದ ವೆಬ್‌ಸೈಟ್ ನಿರ್ವಾಹಕರು ಈ ಸುತ್ತೋಲೆಯನ್ನು ವಿಶ್ವವಿದ್ಯಾಲಯದ ವೆಬ್‌ಸೈಟ್‌ನಲ್ಲಿ ಅಪ್ಲೋಡ್ ಮಾಡಲು ಕೋರಲಾಗಿದೆ ಮತ್ತು ಸಂಬಂಧಪಟ್ಟ ವಿಭಾಗಗಳಿಗೆ ಹಾಗೂ ಸಂಯೋಜಿತ ಕಾಲೇಜುಗಳ ಪೋರ್ಟಲ್‌ನಲ್ಲಿಯೂ ಸಹ ಅಪ್ಲೋಡ್ ಮಾಡಲು ಕೋರಲಾಗಿದೆ.